# ಕರ್ನಾಟಕ ಪರೀಕ್ಷಾ ಪ್ರಾಧಿಕಾರ
# Karnataka Examinations Authority

No. ED/KEA/ UGCET-UGNEET/2024 Date: 18-09-2024

## ಪ್ರಕಟಣೆ

### UGCET-UGNEET 2024 ರ ಎರಡನೇ ಸುತ್ತಿನ ಸೀಟು ಹಂಚಿಕೆಯ ತಾತ್ಕಾಲಿಕ ಫಲಿತಾಂಶ

1. ಎರಡನೇ ಸುತ್ತಿನ ಸೀಟು ಹಂಚಿಕೆಯ ತಾತ್ಕಾಲಿಕ ಫಲಿತಾಂಶವನ್ನು ಇಂದು 18-09-2024 - ಸಂಜೆ 4.00 ರ ನಂತರ ಪ್ರಕಟಿಸಲಾಗುವುದು.
2. ಎರಡನೇ ಸುತ್ತಿನ ತಾತ್ಕಾಲಿಕ ಸೀಟು ಹಂಚಿಕೆಗೆ 13-09-2024 ರ ಮಧ್ಯಾಹ್ನ 2.00 ರವರೆಗೆ ನಮೂದಿಸಿದ Options ಗಳನ್ನು ಪರಿಗಣಿಸಲಾಗಿದೆ.
3. ಇದು UGCET-UGNEET 2024 ರ ಎರಡನೇ ಸುತ್ತಿನ ಸೀಟು ಹಂಚಿಕೆಯ ತಾತ್ಕಾಲಿಕ ಫಲಿತಾಂಶವಾಗಿದ್ದು, ಅಭ್ಯರ್ಥಿಗಳು ತಾತ್ಕಾಲಿಕವಾಗಿ ಹಂಚಿಕೆಯಾಗಿರುವ ಸೀಟಿಗೆ ಕಾಲೇಜಿನಲ್ಲಿ ಪ್ರವೇಶ ಪಡೆಯುವಂತಿಲ್ಲ.
4. ಯಾವುದಾದರೂ ನಿರ್ದಿಷ್ಟ ಆಕ್ಷೇಪಣೆಗಳಿದ್ದಲ್ಲಿ (Options ಗಳನ್ನು ದಾಖಲಿಸಲಾಗಿದೆ, ಎರಡನೇ ಸುತ್ತಿನ ಕಟ್‌ಆಫ್ ರ್‍ಯಾಂಕ್ ಪರಿಶೀಲಿಸಲಾಗಿದೆ, ಆದರೆ ಯಾವುದೂ ಸೀಟು ಹಂಚಿಕೆಯಾಗಿಲ್ಲ) ದಿನಾಂಕ 19-09-2024 ರ ಬೆಳಿಗ್ಗೆ 10.00 ರೊಳಗೆ keauthority-ka@nic.in ಗೆ ಎಲ್ಲಾ ವಿವರಗಳೊಂದಿಗೆ ಮೇಲ್ ಮಾಡಬಹುದು.
5. ಆಕ್ಷೇಪಣೆಗಳನ್ನು ಪರಿಶೀಲಿಸಿದ ನಂತರ ಎರಡನೇ ಸುತ್ತಿನ ಸೀಟು ಹಂಚಿಕೆಯ ಅಂತಿಮ ಫಲಿತಾಂಶಗಳನ್ನು ಪ್ರಕಟಿಸಲಾಗುವುದು.
6. ಸೀಟು ಹಂಚಿಕೆ ಕುರಿತು ಪ್ರಕಟಿಸಲಾಗುವ ಸೂಚನೆಗಳು, ಅಧಿಸೂಚನೆಗಳು ಮತ್ತು ಪ್ರಕಟಣೆಗಳನ್ನು ನೋಡದೆ ಇರುವ ಕಾರಣದಿಂದ ಉಂಟಾಗುವ ಯಾವುದೇ ಪರಿಣಾಮಗಳಿಗೆ ಪ್ರಾಧಿಕಾರವು ಜವಾಬ್ದಾರಿಯಾಗುವುದಿಲ್ಲ. ಅಭ್ಯರ್ಥಿಗಳು ಪ್ರತಿದಿನ ಕನಿಷ್ಠ ಎರಡು ಬಾರಿ ಪ್ರಾಧಿಕಾರದ ವೆಬ್‌ಸೈಟಿಗೆ ಭೇಟಿ ನೀಡಲು ಸೂಚಿಸಲಾಗಿದೆ.

ಕಾರ್ಯನಿರ್ವಾಹಕ ನಿರ್ದೇಶಕರು

18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012
18th Cross, Sampige Road, Malleshwaram, Bengaluru - 560 012.
Phone: 080 - 23 564 583 Helpline : 080 - 23 460 460.
e-mail : keauthority-ka@nic.in Website : http://kea.kar.nic.in